# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 676

ಸದಸ್ಯರ ಹೆಸರು : ಶ್ರೀ ಪ್ರಕಾಶ್ ಕೆ. ರಾಥೋಡ್
(ನಾಮ ನಿರ್ದೇಶನ ಹೊಂದಿದವರು)

ಉತ್ತರಿಸಬೇಕಾದ ದಿನಾಂಕ : 22.02.2022.

ಉತ್ತರಿಸುವವರು : ಪೌರಾಡಳಿತ ಮತ್ತು ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ಯಮಗಳ ಸಚಿವರು.

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕೆ.ಐ.ಎ.ಡಿ.ಬಿ. ಮತ್ತು ಕೆ.ಎಸ್.ಎಸ್.ಐ.ಡಿ.ಸಿ. ವತಿಯಿಂದ ಅಭಿವೃದ್ಧಿಯಾಗಿರುವ ಕೈಗಾರಿಕೆ ನಿವೇಶನಗಳಿಗೆ ಪ್ರತ್ಯೇಕ ಆಸ್ತಿ ತೆರಿಗೆ ವಿಧಿಸಲಾಗುತ್ತಿದೆಯೇ; | ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 51 ಶಾಸನ 2021, ದಿ: 13.01.2022 ರನ್ವಯ ಕೈಗಾರಿಕಾ ಆಸ್ತಿಗಳಿಗೆ ಪ್ರತ್ಯೇಕ ತೆರಿಗೆ ವಿಧಿಸಲು ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ಹಾಗೂ ಕರ್ನಾಟಕ ಪೌರ ನಿಗಮಗಳ ಅಧಿನಿಯಮ 1976 ಗಳಿಗೆ ತಿದ್ದುಪಡಿ ತರಲಾಗಿದೆ. |
| ಆ) | ಆಸ್ತಿ ತೆರಿಗೆ ದರವನ್ನು ಯಾವ ಆಧಾರದ ಮೇಲೆ ನಿಗದಿಪಡಿಸಲಾಗಿದೆ; | ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ನಿಯಮ 101, 102 ಹಾಗೂ ಕರ್ನಾಟಕ ಪೌರ ನಿಗಮಗಳ ಅಧಿನಿಯಮ 1976 ನಿಯಮ 108, 109 ರನ್ವಯ ನಿಗಧಿಪಡಿಸಿದ ಮಾನದಂಡಗಳನ್ನು ಅನುಸರಿಸಿ ಆಸ್ತಿ ತೆರಿಗೆಯನ್ನು ನಿಗಧಿಪಡಿಸಲಾಗುತ್ತಿದೆ. |
| ಇ) | ಕೆ.ಐ.ಎ.ಡಿ.ಬಿ. ಮತ್ತು ಕೆ.ಎಸ್.ಎಸ್.ಐ.ಡಿ.ಸಿ. ಹೊರತುಪಡಿಸಿ ಇತರೆ ಕೈಗಾರಿಕೆಗಳಿಗೆ ಯಾವ ಆಧಾರದ ಮೇಲೆ ಆಸ್ತಿ ದರ ನಿಗದಿಪಡಿಸಲಾಗುವುದು? (ವಿವರ ನೀಡುವುದು) | ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 51 ಶಾಸನ 2021, ದಿ: 13.01.2022 ರನ್ವಯ ವಸತಿ-ಉದ್ದೇಶಿತ ಕಟ್ಟಡಗಳ ಆಸ್ತಿ ತೆರಿಗೆಗಿಂತ ಕಡಿಮೆ ಇಲ್ಲದಂತೆ ಹಾಗೂ ವಾಣಿಜ್ಯ ಉದ್ದೇಶಿತ ಕಟ್ಟಡಗಳ ಆಸ್ತಿ ತೆರಿಗೆಯ ಶೇ.70 ಕ್ಕಿಂತ ಕಡಿಮೆಯಿಲ್ಲದಂತೆ ಎಲ್ಲಾ ಕೈಗಾರಿಕಾ ಆಸ್ತಿಗಳಿಗೆ ತೆರಿಗೆ ನಿರ್ಧರಣೆ ಮಾಡಲು ಮುನಿಸಿಪಲ್ ಕಾಯ್ದೆಗಳಿಗೆ ತಿದ್ದುಪಡಿ ತರಲಾಗಿದೆ. ಅದರಂತೆ, ನಗರ ಸ್ಥಳೀಯ ಸಂಸ್ಥೆಗಳಲ್ಲಿ ಆಸ್ತಿ ತೆರಿಗೆ ವಿಧಿಸಲಾಗುತ್ತಿದೆ. |

ಸಿಐ 44 ಸಿಎಸ್‌ಸಿ 2022

(ಎನ್. ನಾಗರಾಜು (ಎಂ.ಟಿ.ಬಿ))
ಪೌರಾಡಳಿತ ಮತ್ತು ಸಣ್ಣ ಕೈಗಾರಿಕೆ
ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು.